**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 29/2023**

**ಚಾ.ಸಾ. :-1**
**ಪ್ರಾ.ಸಾ. :-3**

| | |
|---|---|
| ಹೆಸರು | : ನವೀನ್ |
| ತಂದೆಯ ಹೆಸರು | : ನರಸಿಂಹೇಗೌಡ |
| ವಯಸ್ಸು | : 36 ವರ್ಷ |
| ಉದ್ಯೋಗ | : ವ್ಯವಸಾಯ |
| ವಾಸಸ್ಥಳ | : ಕಿರಂಗೂರು ಗ್ರಾಮ |

---

**ಪ್ರಮಾಣೀಕರಿಸಲಾದ ದಿನಾಂಕಃ- 02.02.2026**

**<u>ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :</u>**

ಮೃತ ಸುನೀತಾ ರವರು ನನಗೆ ಪರಿಚಯ, ಅವರು ನಮ್ಮ ಗದ್ದೆಯ ಕೆಲಸಕ್ಕೆ ಬರುತ್ತಿದ್ದರು. ಚಾ.ಸಾ-2 ಪರಿಚಯ.

ದಿನಾಂಕಃ 27.03.2023 ರಂದು ರಾತ್ರಿ ಸುಮಾರು 10.30 ರ ಸಮಯದಲ್ಲಿ ಮೃತ ಸುನೀತಾರವರು ಅವರನ್ನು ಪಾಂಡವಪುರದ ರೈಲ್ವೆ ನಿಲ್ದಾಣಕ್ಕೆ ಬಿಡುವಂತೆ ನನ್ನನ್ನು ಕೇಳಿದ್ದು, ನಾನು ಅವರನ್ನು ದ್ವಿಚಕ್ರ ವಾಹನದಲ್ಲಿ ರೈಲ್ವೇ ನಿಲ್ದಾಣಕ್ಕೆ ಕರೆದುಕೊಂಡು ಹೋಗುತ್ತಿದ್ದೆ. ಪಾಂಡವಪುರ-ಮೈಸೂರು ರಸ್ತೆಯಲ್ಲಿ ಕಿರಂಗೂರು ಗ್ರಾಮದ ಬಳಿ ಎದುರುಗಡೆಯಿಂದ ಬಂದಂತಹ ಲಾರಿಯು ನಮ್ಮ ವಾಹನಕ್ಕೆ ಅಪಘಾತಪಡಿಸಿರುತ್ತದೆ. ಆ ಸಮಯದಲ್ಲಿ ಹಿಂಬದಿಯಲ್ಲಿ ಕುಳಿತಿದ್ದ ಸುನೀತಾರವರು ರಸ್ತೆಯ ಬಲಭಾಗಕ್ಕೆ ಬಿದ್ದಿದ್ದು ಅವರ ಮೇಲೆ ಲಾರಿಯು ಹರಿದಿರುತ್ತದೆ. ಅವರನ್ನು ಆ್ಯಂಬುಲೆನ್ಸ್ ಮೂಲಕ ಆಸ್ಪತ್ರೆಗೆ ದಾಖಲು ಮಾಡಿದ್ದು ಅದೇ ದಿನ ಮಧ್ಯರಾತ್ರಿ ಅವರು ಮೃತಪಟ್ಟಿರುತ್ತಾರೆ.

ಅಪಘಾತದ ಬಗ್ಗೆ ಪೊಲೀಸರಿಗೆ ದೂರು ನೀಡಿರುತ್ತೇನೆ. ಸಾಕ್ಷಿಯ ಸಹಿ ಇರುವ ಒಂದು ದಾಖಲೆಯು ದೂರಾಗಿದ್ದು ಅದನ್ನು ಈಗಾಗಲೇ ನಿಪಿ-13 ಎಂದು ಗುರುತಿಸಲಾಗಿದ್ದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-13(ಬಿ) ಎಂದು ಗುರ್ತಿಸಲಾಯಿತು.

ಸಾಕ್ಷಿಯ ಸಹಿ ಇರುವ ಇನ್ನೊಂದು ದಾಖಲೆಯು ಸ್ಥಳ ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರ್ತಿಸಲಾಯಿತು. ಮಹಜರ್ ಸಮಯದಲ್ಲಿ ದ್ವಿಚಕ್ರ ವಾಹನ ಮತ್ತು ಲಾರಿಯನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ಅಪಘಾತ ಲಾರಿ ಚಾಲಕನ ತಪ್ಪಿನಿಂದ ಆಗಿರುತ್ತದೆ. ಅವರು ಇನ್ನೊಂದು ವಾಹನವನ್ನು ಓವರ್ ಟೇಕ್ ಮಾಡಲು ಹೋಗಿ ನಮ್ಮ ವಾಹನಕ್ಕೆ ಡಿಕ್ಕಿಪಡಿಸಿರುತ್ತಾರೆ. ಸಾಕ್ಷಿ ನಿಪಿ-3 ರಿಂದ 5 ನ್ನು ನೋಡಿ ಅಪಘಾತ ಸ್ಥಳ ಹಾಗೂ ವಾಹನವನ್ನು ಗುರುತಿಸಿರುತ್ತಾರೆ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ನನಗೆ ಕನ್ನಡ ಬರೆಯಲು ಸ್ವಲ್ಪ ಬರುತ್ತದೆ. ದೂರನ್ನು ಪೊಲೀಸ್ ಠಾಣೆಯಲ್ಲಿ ತಯಾರು ಮಾಡಿರುತ್ತಾರೆ. ವಕೀಲರು ಠಾಣೆಗೆ ಬಂದಿದ್ದು, ಪೊಲೀಸರು ದೂರು ತಯಾರು ಮಾಡಿರುತ್ತಾರೆ. ಸದರಿ ಬೈಕ್ ಯಾರಿಗೆ ಸೇರಿದ್ದು ಎಂದು ನೆನಪಿಲ್ಲ, ನನ್ನ ಸ್ನೇಹಿತರ ಸ್ನೇಹಿತನಿಗೆ ಸೇರಿದ್ದು. ಲಾರಿಯು ಎದುರು ದಿಕ್ಕಿನಿಂದ ಬಂದು ಗುದ್ದಿರುತ್ತದೆ. ಗುದ್ದಿದಾಗ ಬೈಕಿನ ಮುಂಭಾಗ ಜಖಂ ಆಗಿರುತ್ತದೆ. ನಿಪಿ-5 ರಲ್ಲಿ ಬೈಕಿನ ಮುಂಭಾಗ ಜಖಂ ಆದ ಬಗ್ಗೆ ಕಾಣುವುದಿಲ್ಲ ಎಂದರೆ ಸರಿ. ನಿಪಿ-3 ರಲ್ಲಿ ನಾನು ನಿಂತಿರುವ ಜಾಗ ಪಾಂಡವಪುರದಿಂದ ಮೈಸೂರಿಗೆ ಹೋಗುವ ರಸ್ತೆಯ ಭಾಗ.

**2.** ಲಾರಿ ಗುದ್ದಿದಾಗ ನನಗೆ ತರಚಿದ ಗಾಯಗಳಾಗಿದ್ದವು. ನಾನು ರಾತ್ರಿ 11.00 ಗಂಟೆಯ ಸುಮಾರಿಗೆ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದಿರುತ್ತೇನೆ. ಆಸ್ಪತ್ರೆಗೆ ಪೊಲೀಸರು ಬಂದು ನನ್ನ ಹೇಳಿಕೆಯನ್ನು ಪಡೆದುಕೊಂಡಿಲ್ಲ. ಮಹಜರ್ ಗೆ ಸಹಿ

ಮಾಡಿರುವವರು ನನ್ನ ಸ್ನೇಹಿತರು ಎಂದರೆ ಸರಿ. ಸಾಕ್ಷಿಯು ಮುಂದುವರೆದು ಅವರ ಮನೆಯು ಮಹಜರ್ ಸ್ಥಳದ ಪಕ್ಕದಲ್ಲಿದ್ದು, ಆ ಸಮಯದಲ್ಲಿ ಅವರು ವಾಕಿಂಗ್ ಮಾಡುತ್ತಿದ್ದರು ಎನ್ನುತ್ತಾರೆ.

**3.** ನಾನು ಅಪಘಾತದ ಸ್ಥಳದಲ್ಲಿರಲಿಲ್ಲ ಎಂದರೆ ಸರಿಯಲ್ಲ. ಆ ದಿನ ಅಪಘಾತದಿಂದ ನನಗೆ ಗಾಯಗಳಾಗಿದ್ದರೆ ಆ ದಿನವೇ ದೂರು ಕೊಡುತ್ತಿದ್ದೆ ಎಂದರೆ ಸರಿಯಲ್ಲ. ವಕೀಲರು ನನಗೆ ವಿಮೆ ಪ್ರಕರಣಕ್ಕೆ ಅನುಕೂಲವಾಗುವಂತೆ ದೂರು ಕೊಡಲು ಹೇಳಿದ್ದು, ನಾನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಲಾರಿಯ ಮುಂಭಾಗದಲ್ಲಿ ಏನು ಬರೆದಿರುತ್ತದೆ ಎಂದು ನಾನು ಹೇಳಲಾಗುವುದಿಲ್ಲ. ಮೃತರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**